## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1162 (1430) |
| ಸದಸ್ಯರ ಹೆಸರು | ಶ್ರೀ ಡಿ.ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 16.03.2026 |
| ಉತ್ತರಿಸುವವರು | ಅರಣ್ಯ ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅರಣ್ಯ ಅಂಚಿನ ಪ್ರದೇಶಗಳಲ್ಲಿ ಕಾಡುಪ್ರಾಣಿಗಳ ಹಾವಳಿಯಿಂದ ರೈತರ ಜೀವ ಹಾನಿ ಹಾಗೂ ಬೆಳೆ ಹಾನಿ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಮತ್ತು ಇವುಗಳನ್ನು ತಡೆಗಟ್ಟಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಅರಣ್ಯ ಅಂಚಿನ ಪ್ರದೇಶಗಳಲ್ಲಿ ಕಾಡುಪ್ರಾಣಿಗಳ ಹಾವಳಿ ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>**ಭೌತಿಕ ಅಡೆತಡೆಗಳ ನಿರ್ಮಾಣ:**<br>• ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ, ಆನೆತಡೆ ಕಂದಕ ನಿರ್ಮಾಣ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ.<br>• ರಾಜ್ಯದಲ್ಲಿ ಮಾನವ-ಆನೆ ಸಂಘರ್ಷ ಹೆಚ್ಚಾಗಿರುವ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ನಿಯಂತ್ರಿಸಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಉಪಯೋಗಿಸಿಕೊಂಡು ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ಒಟ್ಟು 428 ಕಿ.ಮೀ ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗಿದೆ.<br>**ಆನೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ 21.11.2022 ರ ಆದೇಶದಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ದಿನಾಂಕ 01.02.2023ರ ಆದೇಶದಲ್ಲಿ ಚಾಮರಾಜನಗರ ಜಿಲ್ಲೆ, ದಿನಾಂಕ 30.06.2023ರ ಆದೇಶದಲ್ಲಿ ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಮತ್ತು ದಿನಾಂಕ 18.05.2024 ರ ಆದೇಶದಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹಾಗೂ ದಿನಾಂಕ: 02-03-2026ರ ಆದೇಶದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತ್ತು ದಿನಾಂಕ 02-03-2026ರ ಆದೇಶದಲ್ಲಿ ಶೃಂಗೇರಿ-ಕೊಪ್ಪ ಆನೆ ಕಾರ್ಯಪಡೆಯನ್ನು ಸ್ಥಾಪಿಸಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ 10 ಆನೆ ಕಾರ್ಯಪಡೆ (Elephant Task Force) ನ್ನು ರಚಿಸಲಾಗಿರುತ್ತದೆ.<br>• ರಾಜ್ಯದಲ್ಲಿ ಮಾನವ- ಆನೆ ಸಂಘರ್ಷ ಉಂಟಾಗುವ ಸಂದರ್ಭಗಳಲ್ಲಿ ಕಾಡಾನೆಗಳನ್ನು ಸೆರೆಹಿಡಿಯುವ ಕಾರ್ಯಾಚರಣೆಗಾಗಿ ದುಬಾರೆ, ಮತ್ತಿಗೋಡು, ಬಳ್ಳೆ, ಹಾರಂಗಿ, ಭೀಮನಕಟ್ಟೆ ಮತ್ತು ರಾಮಾಪುರ ಆನೆ ಶಿಬಿರಗಳಲ್ಲಿನ ಪಳಗಿದ ಆನೆಗಳನ್ನು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| | | ಬಳಸಿಕೊಂಡು ನುರಿತ ಪಶು ವೈದ್ಯಾಧಿಕಾರಿ, ಮಾವುತ ಹಾಗೂ ಇತರೆ ಸಿಬ್ಬಂದಿಗಳೊಳಗೊಂಡ ಮೂರು ತಂಡಗಳನ್ನು ರಚಿಸಲಾಗಿರುತ್ತದೆ. ಸದರಿ ತಂಡವು ರಾಜ್ಯದ ಯಾವುದೇ ಭಾಗದಿಂದ ಕಾಡಾನೆ ಸೆರೆಹಿಡಿಯುವ ಕಾರ್ಯಾಚರಣೆಗೆ ಬೇಡಿಕೆ ಬಂದಾಗ ಈ ತಂಡಗಳಲ್ಲಿ ಒಂದು ತಂಡವನ್ನು ಕಾರ್ಯಾಚರಣೆಗೆ ನಿಯೋಜಿಸಲಾಗುತ್ತಿದೆ.<br><br>**ಚಿರತೆ ಕಾರ್ಯಪಡೆಗಳ ಸ್ಥಾಪನೆ:**<br><br>ಸರ್ಕಾರವು ದಿನಾಂಕ: 31.01.2023ರ ಆದೇಶದಲ್ಲಿ ಮೈಸೂರು ವೃತ್ತದ ಮೈಸೂರು / ನಂಜನಗೂಡು / ಹೆಚ್.ಡಿ.ಕೋಟೆ / ಸರಗೂರು / ಟಿ.ನರಸೀಪುರ / ಮಂಡ್ಯ / ಪಾಂಡವಪುರ / ನಾಗಮಂಗಲ ವ್ಯಾಪ್ತಿಯಲ್ಲಿ ಚಿರತೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ, ವನ್ಯಜೀವಿ ವಿಭಾಗ, ಮೈಸೂರು ಇವರ ನೇತೃತ್ವದಲ್ಲಿ ಚಿರತೆ ಕಾರ್ಯಪಡೆ (Leopard Task Force) ರಚಿಸಲಾಗಿದೆ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಬೆಂಗಳೂರು ರವರ ಅಧಿಕೃತ ಜ್ಞಾಪನಾ ಪತ್ರ ದಿನಾಂಕ: 24.11.2023ರಲ್ಲಿ ಬೆಂಗಳೂರು ಜಿಲ್ಲೆಯ ಕಗ್ಗಲೀಪುರ / ಆನೇಕಲ್ಲು / ಯಲಹಂಕ / ಹೊಸಕೋಟೆ / ಕೆ.ಆರ್.ಪುರಂ ವಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಚಿರತೆ ಕಾರ್ಯಪಡೆಯನ್ನು ರಚಿಸಲಾಗಿದೆ.<br><br>**ಜಲ ಸಂಪನ್ಮೂಲ ಅಭಿವೃದ್ಧಿ:**<br><br>ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನ ಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿ ಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.<br><br>**ಆವಾಸ ಸ್ಥಾನ ಅಭಿವೃದ್ಧಿ:**<br><br>ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br><br>ಆನೆಗಳು ಮತ್ತು ಇತರೆ ವನ್ಯಪ್ರಾಣಿಗಳು ಒಂದು ಅರಣ್ಯ ಪ್ರದೇಶದಿಂದ ಇನ್ನೊಂದು ಅರಣ್ಯ ಪ್ರದೇಶಕ್ಕೆ ಅಡೆತಡೆ ಇರದಂತೆ ಸಂಚರಿಸಲು ಅನುಕೂಲವಾಗುವಂತೆ ವನ್ಯಜೀವಿ ಕಾರಿಡಾರ್ (Wildlife Corridor) ಅನುಷ್ಠಾನಗೊಳಿಸಬೇಕಾಗಿರುತ್ತದೆ, ಇದಕ್ಕಾಗಿ ತಯಾರಿಸಿರುವ ವನ್ಯಜೀವಿ ಕಾರಿಡಾರ್ (Wildlife Corridor) ಪಾಲಿಸಿಯು ಪರಿಶೀಲನೆಗಾಗಿ ಸರ್ಕಾರದ ಹಂತದಲ್ಲಿರುತ್ತದೆ. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| | | **ತ್ವರಿತ ಕಾರ್ಯಾಚರಣೆ:**<br>• ಆನೆ ಕಾರ್ಯಪಡೆ (ETF) ಮತ್ತು ಚಿರತೆ ಕಾರ್ಯಪಡೆ (LTF) ಗಳಿಗೆ 24X7 ಕಾರ್ಯ ನಿರ್ವಹಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.<br>• ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಅಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.<br>• ಚಿರತೆ / ಹುಲಿ ಹಾವಳಿ ಹೆಚ್ಚಾಗಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಬೋನುಗಳನ್ನು ಇರಿಸಿ ಸೆರೆ ಹಿಡಿದು, ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ.<br>• ವನ್ಯಪ್ರಾಣಿಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಈಗಾಗಲೇ ರಚಿಸಿರುವ RRT, ADC, ಮತ್ತು ETF ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಂಡಗಳನ್ನು ಒಟ್ಟುಗೂಡಿಸಿ ಮಾನವ-ವನ್ಯಜೀವಿ ಸಂಘರ್ಷ ಉಪ ತಂಡಗಳಾಗಿ ರಚಿಸಿ ಆಯ್ದ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.<br>• ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.<br>• ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.<br>• ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.<br>**ಅರಿವು ಮೂಡಿಸಲು:**<br>• ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>• ಶಾಲಾಮಕ್ಕಳಿಗೆ ಅರಿವು ಮೂಡಿಸಲು "ಚಿಣ್ಣರ ವನದರ್ಶನ" ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ.<br>**ಸಹಾಯ ಧನ:**<br>ರೈತರಿಗೆ ಸಬ್ಸಿಡಿ ದರದಲ್ಲಿ ಸೋಲಾರ್ ಬೇಲಿ ನಿರ್ಮಾಣ ಮಾಡಲು ಉತ್ತೇಜನ ನೀಡಲಾಗುತ್ತಿದೆ ಹಾಗೂ ಅರಣ್ಯದ ಅಂಚಿನಲ್ಲಿ ಬರುವ ಖಾಸಗಿ ಜಮೀನುಗಳ ಸುತ್ತಾ ಸರಕಾರದ ವತಿಯಿಂದ ದೊರಕುವ ಶೇ. 50 ಸಬ್ಸಿಡಿಯನ್ನು ಬಳಸಿಕೊಂಡು ಸೌರಶಕ್ತಿ ಬೇಲಿಯನ್ನು ನಿರ್ಮಿಸಲಾಗುತ್ತಿದೆ.<br>**ತಂತ್ರಜ್ಞಾನ ಬಳಕೆ:**<br>• ಮಾನವ- ಆನೆ ಸಂಘರ್ಷ ಹೆಚ್ಚಿರುವ 10 ಜಿಲ್ಲೆಗಳಲ್ಲಿ "ಆನೆ ಎಲ್ಲಿ" ಎಂಬ ತಂತ್ರಜ್ಞಾನ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಈ ವ್ಯವಸ್ಥೆಯು ಸಾರ್ವಜನಿಕ ದೂರುಗಳು, ಗಸ್ತು ತಿರುಗುವಿಕೆ ಮುಂತಾದ ವಿವಿಧ ಮಾಹಿತಿಗಳ ಮೂಲಕ ಒಂದು ಪ್ರದೇಶದಲ್ಲಿ ಆನೆಗಳ ಚಲನವಲನವನ್ನು ಮೇಲ್ವಿಚಾರಣೆ ಮಾಡುತ್ತದೆ. ಈ ಮಾಹಿತಿಯು ಆನೆಗಳ ಚಲನವಲನದ ಮಾದರಿಯನ್ನು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| | | ಪತ್ತೆಹಚ್ಚಲು ಮತ್ತು ಸಾರ್ವಜನಿಕರಿಗೆ ಮುಂಚಿನ ಎಚ್ಚರಿಕೆ ಸಂದೇಶಗಳನ್ನು ಕಳುಹಿಸಲು ಸಹಾಯ ಮಾಡುತ್ತಿದೆ. ಮುಂದುವರೆದು, ವಿವಿಧ ವಿಭಾಗಗಳಿಂದ ಲಭ್ಯವಾಗುವ ಮಾಹಿತಿಯನ್ನು ರಿಯಲ್-ಟೈಮ್‌ನಲ್ಲಿ ಸಂಗ್ರಹಿಸಿ, ವಿಶ್ಲೇಷಿಸಿ, ಸೂಕ್ತ ನಿರ್ಧಾರಗಳನ್ನು ಕೈಗೊಳ್ಳಲು ಹಾಗೂ ಕ್ಷೇತ್ರ ಮಟ್ಟದ ಚಟುವಟಿಕೆಗಳನ್ನು ಸಮನ್ವಯಗೊಳಿಸಲು, ಕೇಂದ್ರ ಸ್ಥಾನದಲ್ಲಿ ಸಂಯೋಜಿತ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್(ICCC) ಹಾಗೂ 12 ವಿಭಾಗಗಳಲ್ಲಿ ವಿಭಾಗೀಯ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್(DCCC) ಸ್ಥಾಪಿಸಲಾಗುತ್ತಿದೆ.<br>• ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆ, ಹುಲಿ, ಚಿರತೆಗಳ ಚಲನ-ವಲನಗಳನ್ನು ದಿನನಿತ್ಯ ಗಮನಿಸಲು ಇಲಾಖಾವತಿಯಿಂದ "ಹೆಜ್ಜೆ" ಎಂಬ ಡ್ಯಾಶ್ ಬೋರ್ಡ್‌ನ್ನು ತಯಾರಿಸಲಾಗಿದೆ.<br>• ಕಾಡಂಚಿನ ಗ್ರಾಮಗಳಲ್ಲಿ ವನ್ಯಪ್ರಾಣಿಗಳು ಬಂದಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು Advance alert system ಅನ್ನು ತಯಾರಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರಿಗೆ ನೇರವಾಗಿ ಸಂದೇಶಗಳನ್ನು ಕಳುಹಿಸಲಾಗುತ್ತಿದೆ.<br>• ಕಾಡಾನೆ ಇರುವ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು ಡಿಜಿಟಲ್ ಬೋರ್ಡ್‌ಗಳನ್ನು ಅಳವಡಿಸಲಾಗಿದೆ.<br>• ಅರಣ್ಯದಂಚಿನ ಆಯ್ದ ಪ್ರದೇಶಗಳಲ್ಲಿ "AI" Based Camera ಗಳನ್ನು ಅಳವಡಿಸಲಾಗಿದ್ದು, ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.<br>• ಡ್ರೋನ್‌ಗಳ ಮುಖಾಂತರ ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.<br><br>**ಇ-ಪರಿಹಾರ:**<br><br>ಈ ಆನ್‌ಲೈನ್ ಅಪ್ಲಿಕೇಶನ್ ಬೆಳೆ, ಆಸ್ತಿ ಮತ್ತು ಜೀವಹಾನಿ ಪ್ರಕರಣಗಳನ್ನು ಪ್ರಕ್ರಿಯೆಗೊಳಿಸುತ್ತದೆ. ದಯಾತ್ಮಕ ಧನ ಪಾವತಿ ಪ್ರಕ್ರಿಯೆಯನ್ನು ಸುಗಮಗೊಳಿಸುತ್ತದೆ ಮತ್ತು ಆಡಳಿತ ವಿಳಂಬವನ್ನು ಕಡಿಮೆ ಮಾಡುತ್ತದೆ. ಅಪ್ಲಿಕೇಶನ್ ನಲ್ಲಿ ದಾಖಲಿಸಲಾದ Backend Data ದಿಂದ ಸಂಘರ್ಷದ ಕಾರಣಗಳು, ಹೆಚ್ಚಿನ ಸಂಘರ್ಷದ ಪ್ರದೇಶಗಳು ಮತ್ತು ಸಂಘರ್ಷ-ಉಂಟುಮಾಡುವ ಪ್ರಾಣಿಗಳನ್ನು ವಿಶ್ಲೇಷಿಸಲು ಸಹಾಯ ಮಾಡುತ್ತದೆ. |
| ಆ) | ಕಾಡು ಪ್ರಾಣಿಗಳ ದಾಳಿಯಿಂದ ಮೃತಪಟ್ಟ ರೈತರ ಕುಟುಂಬಗಳಿಗೆ ಹಾಗೂ ಬೆಳೆ ಹಾನಿಗೊಳಗದ ರೈತರಿಗೆ ನೀಡಬೇಕಾದ ಪರಿಹಾರ ಧನವನ್ನು ವಿತರಿಸುವಲ್ಲಿ ವಿಪರೀತ ವಿಳಂಬವಾಗುತ್ತಿರುವುದು ನಿಜವೇ: ಕಳೆದ ಒಂದು ವರ್ಷದಲ್ಲಿ ಎಷ್ಟು ಪ್ರಕರಣಗಳಲ್ಲಿ ಪರಿಹಾರ ಬಾಕಿ ಉಳಿದಿದೆ ಮತ್ತು ಅದಕ್ಕೆ ಕಾರಣಗಳೇನು: (ಜಿಲ್ಲಾವಾರು | ಕಾಡು ಪ್ರಾಣಿಗಳ ದಾಳಿಯಿಂದ ಮೃತಪಟ್ಟ ರೈತರ ಕುಟುಂಬಗಳಿಗೆ ಹಾಗೂ ಬೆಳೆ ಹಾನಿಗೊಳಗದ ರೈತರಿಗೆ ನೀಡಬೇಕಾದ ದಯಾತ್ಮಕ ಧನವನ್ನು ಅನುದಾನ ಲಭ್ಯತೆಗನುಸಾರ ಯಾವುದೇ ವಿಳಂಬವಿಲ್ಲದೇ ಪಾವತಿ ಮಾಡಲಾಗುತ್ತಿರುತ್ತದೆ.<br><br>ಕಳೆದ ಒಂದು ವರ್ಷದಿಂದ ದಯಾತ್ಮಕ ಧನವನ್ನು ಪಾವತಿಸಲು ಯಾವುದೇ ಪ್ರಕರಣಗಳು ಬಾಕಿಯಿರುವುದಿಲ್ಲ. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| | ಮತ್ತು ಮೊತ್ತದ ವಿವರ ನೀಡುವುದು); | |
| ಇ) | ಕಾಡಾನೆಗಳ ಹಾವಳಿ ತಡೆಗಟ್ಟಲು ಅತ್ಯಂತ ಪರಿಣಾಮಕಾರಿಯಾಗಿದ್ದ ರೈಲ್ವೆ ಬಾರಿಕೇಡ್ ನಿರ್ಮಾಣ ಕಾಮಗಾರಿಯನ್ನು ರಾಜ್ಯಾದ್ಯಂತ ಅರ್ಧಕ್ಕೆ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕಾಡಾನೆಗಳ ಹಾವಳಿ ತಡೆಗಟ್ಟಲು 2024-25ನೇ ಸಾಲಿನಲ್ಲಿ ವಿಧಾನಸಭಾ ಕ್ಷೇತ್ರುವಾರು 103 ಕಿ.ಮೀ ಭೌತಿಕ ಗುರಿಯನ್ನು ನಿಗಧಿಪಡಿಸಲಾಗಿದ್ದು, ರೂ.15000.00 ಲಕ್ಷಗಳ ಅನುದಾನ ಹಂಚಿಕೆ ಮಾಡಲಾಗಿರುತ್ತದೆ.<br><br>ಅಲ್ಲದೇ, ಕೊಪ್ಪ ವಿಭಾಗಕ್ಕೆ 7.6 ಕಿ.ಮೀ, ಮೈಸೂರು ವಿಭಾಗಕ್ಕೆ 1.750 ಕಿ.ಮೀ ಹಾಗೂ ಚಾಮರಾಜನಗರ ವೃತ್ತದ ಎಂ.ಎಂ ಹಿಲ್ಸ್ ವಿಭಾಗಕ್ಕೆ 7.239 ಕಿ.ಮೀ (ಮಲೆ ಮಹದೇಶ್ವರ ಬೆಟ್ಟದಲ್ಲಿ ದಿನಾಂಕ: 24.04.2025ರಂದು ಜರುಗಿದ 09ನೇ ಸಚಿವ ಸಂಪುಟ ಸಭೆಯ ಸಹಮತಿಸಿರುವಂತೆ) ರೈಲ್ವೇ ಬ್ಯಾರಿಕೇಡ್ ನಿರ್ಮಾಣದ ಗುರಿ ನಿಗಧಿಪಡಿಸಲಾಗಿರುತ್ತದೆ.<br><br>ಸದರಿ ಪ್ರಸ್ತಾಪಿಸಿರುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ವಿಸ್ತೃತ ಯೋಜನಾ ವರದಿ (DPR) ತಯಾರಿಸಿ, ಸದರಿ ಡಿ.ಪಿ.ಆರ್‌ಗಳಿಗೆ ಲೋಕೋಪಯೋಗಿ ಇಲಾಖೆಯಿಂದ (PWD) ತಾಂತ್ರಿಕ ಪರಿಶೀಲನೆ ನಡೆಸಿ, ಅಂದಾಜು ವೆಚ್ಚ ಹಾಗೂ ತಾಂತ್ರಿಕ ವಿವರಗಳನ್ನು ದೃಢೀಕರಿಸಲಾಗುತ್ತದೆ. ಅಂದಾಜು ವೆಚ್ಚವನ್ನು ಆಧರಿಸಿ ಆಯಾ ವಿತ್ತಾಧಿಕಾರಿಗಳಿಗೆ ಪ್ರದತ್ತವಾದ ವಿತ್ತಾಧಿಕಾರದನ್ವಯ ಆಡಳಿತಾತ್ಮಕ ಅನುಮೋದನೆ ಪಡೆದ ನಂತರ, ಕರ್ನಾಟಕ ಸಾರ್ವಜನಿಕ ಖರೀದಿ ಪೋರ್ಟಲ್ (KTPP Portal) ಮೂಲಕ ನಿಯಮಾನುಸಾರ ಟೆಂಡರ್ ಪ್ರಕ್ರಿಯೆ ಕೈಗೊಂಡು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು.<br><br>ಅದರನ್ವಯ ನಿಯಮಾನುಸಾರ ಅವಶ್ಯ ಕ್ರಮಗಳನ್ನು ಕೈಗೊಂಡಿದ್ದು, ಟೆಂಡರ್ ಪ್ರಕ್ರಿಯೆಗಳು ಚಾಲ್ತಿಯಲ್ಲಿರುತ್ತವೆ.<br><br>ಮೇಲ್ಕಂಡ ಯೋಜನೆಯ ಒಟ್ಟು ವೆಚ್ಚ ರೂ. 20133.75 ಲಕ್ಷವಾಗಿರುತ್ತದೆ ಹಾಗೂ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಈ) | ಸದರಿ ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಸ್ಥಗಿತಗೊಳಿಸಲು ಪ್ರಬಲ ಕಾರಣಗಳೇನು: ಈ ಯೋಜನೆಗೆ ಅನುದಾನದ ಕೊರತೆ ಇದೆಯೇ; ಅಥವಾ ಆಡಳಿತಾತ್ಮಕ ನಿರ್ಲಕ್ಷವೇ: (ಯೋಜನೆಯ ಒಟ್ಟು ವೆಚ್ಚ ಮತ್ತು ಬಾಕಿ ಇರುವ ಕಾಮಗಾರಿಯ ವಿವರ ನೀಡುವುದು): | |
| ಉ) | ರೈತರ ಹಿತ ದೃಷ್ಟಿಯಿಂದ ನಿಂತು ಹೋಗಿರುವ ರೈಲ್ವೆ ಬ್ಯಾರಿಕೇಡ್ ನಿರ್ಮಾಣವನ್ನು ಯಾವಾಗ ಪುನಾರಂಭಿಸಲಾಗುವುದು: ಕಾಡು ಪ್ರಾಣಿಗಳು ನಾಡಿಗೆ ಬರದಂತೆ ತಡೆಯಲು ಸೋಲಾರ್ ಬೇಲಿ ಅಥವಾ ಹ್ಯಾಂಗಿಂಗ್ ಫೆನ್ಸಿಂಗ್ ಅಂತ ಪರ್ಯಾಯ ಯೋಜನೆಗಳನ್ನು ಜಾರಿಗೆ ತರಲು ಸರ್ಕಾರ ರೂಪಿಸಿರುವ ಕಾರ್ಯ ಯೋಜನೆಗಳೇನು? (ವಿವರ ನೀಡುವುದು) | ಕಾಡಾನೆಗಳ ಹಾವಳಿ ತಡೆಗಟ್ಟಲು ರೈಲ್ವೇ ಬ್ಯಾರಿಕೇಡ್ ನಿರ್ಮಾಣ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಗಳು ಚಾಲ್ತಿಯಲ್ಲಿರುತ್ತದೆ.<br>ಕಾಡಂಚಿನ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಇದುವರೆವಿಗೂ ಅರಣ್ಯದಂಚಿನಲ್ಲಿ 1360.87 ಕಿ.ಮೀ ಸೌರಶಕ್ತಿ ತಂತಿಬೇಲಿ, 1775.41 ಕಿ.ಮೀ ಆನೆತಡ ಕಂದಕ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.<br>ಮಾನವ-ಆನೆ ಸಂಘರ್ಷ ಹೆಚ್ಚಿರುವ ಪ್ರದೇಶಗಳಲ್ಲಿ ಅಗತ್ಯಗನುಸಾರವಾಗಿ ಇತರೆ ಭೌತಿಕ ತಡೆಗೋಡೆಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಇ-ಸಂಖ್ಯೆ: ಅಪಜೀ 77 ಎಫ್‌ಡಬ್ಲ್ಯೂಎಲ್ 2026**

(ಈಶ್ವರ ಬಿ. ಖಂಡ್ರೆ)
ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು